**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ**
**ತಿಪಟೂರು**

**ಸಿ.ಸಿ ನಂ. 1029/2017**

ಚಾಸಾಃ 2
ಫ್ರಾಸಾಃ 2

**ದಿನಾಂಕಃ 15-09-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ರಾಜಣ್ಣ |
| ತಂದೆಯ/ಗಂಡನ ಹೆಸರು | ಃ | ಸಿದ್ರಾಮಯ್ಯ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಅಡಿಗೆ ಕೆಲಸ |
| ವಾಸ ಸ್ಥಳ | ಃ | ಹುಚ್ಚಗೊಂಡನಹಳ್ಳಿ |

**ಮುಖ್ಯ ವಿಚಾರಣೆ ಎಪಿಪಿಯವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ. ಈಗ ಸುಮಾರು 5 ವರ್ಷಗಳ ಹಿಂದೆ ನಾನು ಅಡಿಗೆ ಕೆಲಸಕ್ಕೆ ಹೋಗುವಾಗ ಜಾಕಿ ಗಾರ್ಮೆಂಟ್ಸ ಬಳಿ ಒಂದು ದಾಖಲೆಯ ಮೇಲೆ ಪೊಲೀಸರು ನನ್ನ ಸಹಿಯನ್ನು ಪಡೆದಿರರುತ್ತಾರೆ ಅದಲ್ಲಿರುವ ವಿಷಯ ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ಒಂದು ದಾಖಲೆಯ ಮೇಲೆ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿದಿರುವ ಕಾರಣ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**ಪಾಟೀ ಸವಾಲು ಸರ್ಕಾರಿ ಅಭಿಯೋಜಕರವರಿಂದಃ**

ದಿಃ 14-11-2016 ರಂದು ಬೆಳಗ್ಗೆ 11-30 ಗಂಟೆಯಿಂದ 2-30 ಗಂಟೆವರೆಗೆ ಕೃತ್ಯ ಸ್ಥಳ ಆದ ತಿಪಟೂರು ತಾಲ್ಲೂಕು ಕಸಸಬಾ ಹೋಬಳಿ ಕೋಟನಾಯಕನಹಳ್ಳಿ ಸಮೀಪದ ಶ್ರೀನಿಧಿ ಡಾಬಾ ಮುಂಭಾಗದ ಎನ್ ಹೆಚ್ 206 ರಸ್ತೆ ಬದಿಯ ಸ್ಥಳದಿಂದ ಕುಣಿಗಲ್ ಟೌನ್ ಸಿವಿಲ್ ಬಸ್ ನಿಲ್ದಾಣದ ಬಳಿಗೆ ನನ್ನ ಸಮಕ್ಷಮ ಪೊಲೀಸರು ಕೃತ್ಯಕ್ಕೆ ಸಂಬಂಧಿಸಿ ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಷಯ ತಿಳಿದು ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಇರುವುದಿಲ್ಲ**

**ಮರು ವಿಚಾರಣೆ - ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ
ತಿಪಟೂರು.